# ಕರ್ನಾಟಕ ವಿಧಾನ ಪರಿಷತ್ತು

**01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 328**

**02. ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

**03. ಉತ್ತರಿಸುವ ದಿನಾಂಕ : 18.07.2024**

**04. ಉತ್ತರಿಸುವ ಸಚಿವರು : ಗೃಹ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಪೊಲೀಸರಿಗೆ ಇರುವ ನಿವೃತ್ತಿಯ ವಯಸ್ಸೆಷ್ಟು; ಇವರುಗಳಲ್ಲಿ ಕೆಳಹಂತದ ಕಾನ್ಸ್‌ಟೇಬಲ್ / ಹೆಡ್ ಕಾನ್ಸ್‌ಟೇಬಲ್‌ಗಳಂತಹ ಸಿಬ್ಬಂದಿಗಳು ದೈಹಿಕ ಸಾಮರ್ಥ್ಯವನ್ನು ಹೊಂದಿರುವ ಕೆಲಸಗಳಲ್ಲಿ ಈ ವಯಸ್ಸಿನವರೆಗೂ ಕಾರ್ಯನಿರ್ವಹಿಸಲು ಸಾಧ್ಯವೇ; ಇಲ್ಲವಾದಲ್ಲಿ ಈ ಕುರಿತು ಇಲಾಖೆಯ ಕ್ರಮಗಳೇನು; | ಇಲಾಖೆಯಲ್ಲಿ ಕಾರ್ಯ ನಿರ್ವಹಿಸುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೂ ನಿವೃತ್ತಿಯ ವಯಸ್ಸು 60 ವರ್ಷ.<br><br>ಇಲಾಖೆಯಲ್ಲಿ ಪಿಸಿ, ಪಿ.ಎಸ್.ಐ ಮತ್ತು ಡಿ.ವೈ.ಎಸ್.ಪಿ ಹಂತದಲ್ಲಿ ನೇರ ನೇಮಕಾತಿ ಮೂಲಕ ಇಲಾಖೆಗೆ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ಬಳಿಕ ಸೇವಾವಧಿಯಲ್ಲಿ ಕನಿಷ್ಠ 02 ಮುಂಬಡ್ತಿಗಳು ದೊರೆಯಲಿರುವ ಕಾರಣ, ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು 50 ವರ್ಷಗಳ ಬಳಿಕ ಬಹುತೇಕ ಮೇಲ್ವಿಚಾರಕ (Supervisory) ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲಿದ್ದು, ಆ ಹಂತದಲ್ಲಿ ದೈಹಿಕ ಕ್ಷಮತೆಯನ್ನು ಬೇಡುವ ಕಾರ್ಯಗಳು ಬಹುತೇಕ ಹಂಚಿಕೆಯಾಗುವುದಿಲ್ಲ. |
| ಆ) | ಪೊಲೀಸ್ ಇಲಾಖೆಯಲ್ಲಿನ ಕಾನ್ಸ್‌ಟೇಬಲ್ / ಹೆಡ್ ಕಾನ್ಸ್‌ಟೇಬಲ್‌ಗಳಂತಹ ಕೆಳಹಂತದ ಸಿಬ್ಬಂದಿಗಳಿಗೆ ಅವರ ಪೂರ್ಣ ಗ್ರಾಚ್ಯುಟಿಗಳನ್ನು ನೀಡುವ ಜೊತೆಗೆ ನಿವೃತ್ತಿ ವಯಸ್ಸನ್ನು ಕಡಿಮೆ ಮಾಡಲು ಸರ್ಕಾರದ ಕ್ರಮಗಳೇನು; (ವಿವರಗಳೊಂದಿಗೆ ಮಾಹಿತಿ ನೀಡುವುದು) | ಪ್ರಸ್ತುತ ನಿವೃತ್ತಿ ವಯಸ್ಸನ್ನು ಕಡಿಮೆ ಮಾಡುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಇ) | ಇತ್ತೀಚಿನ ದಿನಗಳಲ್ಲಿ ವಯಸ್ಸಾದಂತೆ ಮನುಷ್ಯನ ದೈಹಿಕ ಸಾಮರ್ಥ್ಯ ಕುಸಿಯುತ್ತಿದ್ದು, ಪೊಲೀಸ್ ಇಲಾಖೆಯಲ್ಲಿನ ಸಿಬ್ಬಂದಿಗಳಿಗೆ ಮುಖ್ಯವಾಗಿ ಮಾನಸಿಕ ಮತ್ತು ದೈಹಿಕ ಸಾಮರ್ಥ್ಯದ ಅವಶ್ಯಕತೆಯಿದ್ದು, ಈ ಕುರಿತಾಗಿ ಒಂದು ಸಮಿತಿಯನ್ನು ರಚಿಸಿ ಇದರ ಸಾಧಕ | ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಪರಿಶೀಲನೆಗಾಗಿ ಸಮಿತಿ ರಚಿಸುವ ಪ್ರಸ್ತಾವ ಸರ್ಕಾರದ ಮುಂದೆ ಇರುವುದಿಲ್ಲ. ಮಾನಸಿಕ ಮತ್ತು ದೈಹಿಕ ಸಾಮರ್ಥ್ಯಕ್ಕೆ ಪೂರಕವಾಗಿ ಪ್ರಸ್ತುತ 40 ಸಮಾಲೋಚಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| | ಬಾಧಕಗಳನ್ನು ಚರ್ಚಿಸಿ ವರದಿ ಪಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರಗಳೊಂದಿಗೆ ಮಾಹಿತಿ ನೀಡುವುದು) | ಪ್ರತಿ ಪೊಲೀಸ್ ಅಧಿಕಾರಿ/ಸಿಬ್ಬಂದಿಯಗಳಿಗೆ ವಾರ್ಷಿಕ ವೈದ್ಯಕೀಯ ತಪಾಸಣೆಗೆ ರೂ.1000/-ಗಳನ್ನು ಮಂಜೂರು ಮಾಡಿ ಸರ್ಕಾರವು ಆದೇಶಿಸಿದೆ.<br>ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಹಾಗೂ ಅವಲಂಬಿತ ಕುಟುಂಬ ಸದಸ್ಯರು ಒಳರೋಗಿಯಾಗಿ ಚಿಕಿತ್ಸೆ ಪಡೆಯಲು ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ. |

**HD/145/PPS/2024**

(ಡಾ|| ಜಿ.ಪರಮೇಶ್ವರ)
ಗೃಹ ಸಚಿವರು